# KEY ANSWER

ವಿಷಯ: ಕನ್ನಡ | ರೂಪಣಾತ್ಮಕ ಪರೀಕ್ಷೆ 2 | ಅಂಕಗಳು : ೨೦
ತರಗತಿ: ೧೦ನೇ | | ಸಮಯ: ೪೦ ನಿಮಿಷಗಳು

**I.**

1. ಆ) ಅದೃಷ್ಟ

2. ಅ) ಮುಂದಾಳು

3. ಆ) ಪಾಪ

4. ಇ) ವಂಶ

**II.**

5. ಸಂಪತ್ತನ್ನು ಕಾಯುವ ಕಷ್ಟ ಕಾಪಾಡುವ ಪಾಡು ಯಾರಿಗೆ ಬೇಕು, ಎಷ್ಟು ಬಿಗಿಯಾಗಿ ಬಿಗಿದರೂ ನುಸುಳಿಕೊಳ್ಳುವಂಥ ಜಾಣ್ಮೆ ಅದಕ್ಕೆ ತಿಳಿದಿದೆ. ಮಹಾವೀರರಾದ ಸಾವಿರಾರು ಸೈನಿಕರ ಕತ್ತಿಗಳ ಪಂಜರದ ನಡುವೆ ಕಾಪಿಟ್ಟ ಸಂಪತ್ತು ಕೂಡ ತನ್ನ ತಾನೆ ಕಣ್ಮರೆಯಾಗುತ್ತದೆ. ಮದಜಲವನ್ನು ಸುರಿದು ಸುತ್ತೆಲ್ಲ ಕತ್ತಲು ಬರಿಸುವ ಮದ್ದಾನೆಗಳ ಕಾವಲಿನಲ್ಲಿ ಕೂಡ ಕಣ್ಣು ತಪ್ಪಿಸಿ ಓಡಿಬಿಡುತ್ತದೆ.

6. ಶಿಕ್ಷಣದ ಬಗ್ಗೆ ವಿಶ್ವೇಶ್ವರಯ್ಯ ಅವರು ಆಧುನಿಕ ಶಿಕ್ಷಣವೇ ಎಲ್ಲ ಸಮಸ್ಯೆಗಳಿಗೆ ಪರಮೋಚ್ಚ ಪರಿಹಾರ. ಶಿಕ್ಷಣವು ಸಂಜೀವಿನಿ. ಶಿಕ್ಷಣಕ್ಕಾಗಿ ಶಿಕ್ಷಣವಿರಬೇಕು. ಅದು ಕೆಲವೇ ಜನರ ಸೊತ್ತಾಗದೆ ಪ್ರಗತಿಪರ ರಾಜ್ಯದಲ್ಲಿ ಎಲ್ಲರ ಆಜನ್ಮಸಿದ್ಧ ಹಕ್ಕಾಗಬೇಕು ಎಂದು ಹೇಳಿದ್ದಾರೆ.

7. ನಾರಾಯಣ ಗುರು ಅವರ ಪ್ರಮುಖ ಆಶಯ ಮಾನವ ಕುಲಕ್ಕೆ ಒಂದೇ ಜಾತಿ, ಒಂದೇ ಧರ್ಮ ಮತ್ತು ಒಬ್ಬನೇ ದೇವರು ಎಂಬುದು.

**III.**

8. ಹಲಗಲಿಯ ಬೇಡರು ಕುಂಪಣಿ ಸರ್ಕಾರ ಹೊರಡಿಸಿದ್ದ ನಿಶ್ಶಸ್ತ್ರೀಕರಣದ ಆದೇಶವನ್ನು ವಿರೋಧಿಸಿ ತಮ್ಮ ಆಯುಧಗಳನ್ನು ಕೊಡಲು ಒಪ್ಪದೆ ಎದ್ದು ಮುಂಗಾರಿನ ಸಿಡಿಲು ಸಿಡಿಯುವ ಹಾಗೆ ಗುಂಡು ಹೊಡೆರು. ಬ್ರಿಟೀಷ್ ಸೈನಿಕರು ದಂಗು ಹಿಡಿದು ದೂರ ಸರಿದು ನಿಂತರು. ಆಗ ಇನ್ನು ಹೆಚ್ಚಿನ ದಂಡು ಬರಲಿ ಎಂದು ಸಾಹೇಬ ಪತ್ರ ಬರೆದು ತನ್ನ ಮೇಲಿನ ಅಧಿಕಾರಿಗೆ ಕಳಿಸಿದನು. ಆಗ ದಂಡು ತಯಾರಾಗಿ ಹಲಗಲಿಗೆ ಬಂದಿತು.

**IV.**

9. **ಆಯ್ಕೆ:** ಈ ವಾಕ್ಯವನ್ನು ಕುಮಾರವ್ಯಾಸ ರಚಿಸಿರುವ 'ಕರ್ಣಾಟಕ ರತ್ನ ಕಥಾಮಂಜರಿ' ಎಂಬ ಮಹಾಕಾವ್ಯದಿಂದ ಆಯ್ದ 'ಕೌರವೇಂದ್ರನ ಕೊಂದೆ ನೀನು' ಎಂಬ ಪದ್ಯದಿಂದ ಆರಿಸಲಾಗಿದೆ.

**ಸಂದರ್ಭ:** ಕೃಷ್ಣನು ಪಾಂಡವ ಹಾಗು ಕೌರವರ ನಡುವೆ ಸಂಧಿ ಮಾಡಲು ಹೋಗಿ ವಿಫಲವಾಗಿ ಹಿಂದಿರುಗುವಾಗ ಕರ್ಣನನ್ನು ಕರೆದುಕೊಂಡು ಬಂದು ಮೈದುನತನದ ಸರಸದಲ್ಲಿ ಮಾತನಾಡುವ ಸಂದರ್ಭದಲ್ಲಿ ಈ ಮಾತನ್ನು ಕರ್ಣನು ಕೃಷ್ಣನಿಗೆ ಹೇಳುತ್ತಾನೆ.

**ಸ್ವಾರಸ್ಯ:** ಕರ್ಣನು ಮುಂದೆ ನಡೆಯುವ ಮಹಾಭಾರತ ಕುರುಕ್ಷೇತ್ರ ಯುದ್ಧದ ಭೀಕರತೆಯನ್ನು ಈ ಮಾತಿನಲ್ಲಿ ಬಹು ಸ್ವಾರಸ್ಯಪೂರ್ಣವಾಗಿ ಹೇಳುತ್ತಾನೆ.

Downloaded from scoringtarget.com

**V.**

10. **ಕುಮಾರವ್ಯಾಸ:**

ಕುಮಾರವ್ಯಾಸ ಎಂದು ಪ್ರಸಿದ್ಧನಾದ ಗದುಗಿನ ನಾರಣಪ್ಪನು ಕ್ರಿ. ಶ. ಸುಮಾರು ೧೪೩೦ರಲ್ಲಿ ಗದಗ ಪ್ರಾಂತ್ಯದ ಕೋಳಿವಾಡದಲ್ಲಿ ಜನಿಸಿದರು. ಇವರು ಕರ್ನಾಟಕ ರತ್ನ ಕಥಾ ಮಂಜರಿ ಮತ್ತು ಐರಾವತ ಎಂಬ ಕೃತಿಗಳನ್ನು ರಚಿಸಿದ್ದಾರೆ.

ಇವರು ತಮ್ಮ ಕೃತಿಯಲ್ಲಿ ರೂಪಕಾಲಂಕಾರವನ್ನೂ ಹೆಚ್ಚಾಗಿ ಬಳಸಿದ್ದರಿಂದ 'ರೂಪಕ ಸಾಮ್ರಾಜ್ಯದ ಚಕ್ರವರ್ತಿ' ಎಂಬ ಬಿರುದನ್ನು ಪಡೆದಿದ್ದಾರೆ. 'ಕರ್ನಾಟಕ ರತ್ನ ಕಥಾ ಮಂಜರಿ' ಕೃತಿಯನ್ನು ಕನ್ನಡ ಭಾರತ, ಗದುಗಿನ ಭಾರತ, ಕುಮಾರವ್ಯಾಸ ಭಾರತ ಎಂಬ ಹೆಸರುಗಳಿಂದಲೂ ಕರೆಯುತ್ತಾರೆ.

11. **ವಿದ್ಯಾವಾಚಸ್ಪತಿ ಡಾ. ಬನ್ನಂಜೆ ಗೋವಿಂದಾಚಾರ್ಯ:**

ವಿದ್ಯಾವಾಚಸ್ಪತಿ ಡಾ. ಬನ್ನಂಜೆ ಗೋವಿಂದಾಚಾರ್ಯ ಇವರು ಉಡುಪಿಯಲ್ಲಿ ೧೯೩೬ ರ ಆಗಸ್ಟ ೩ ರಂದು ಜನಿಸಿದರು. ತಂದೆ ಪಡುಮಣ್ಣೂರು ನಾರಾಯಣ ಆಚಾರ್ಯ. ಡಾ. ಬನ್ನಂಜೆ ಗೋವಿಂದಾಚಾರ್ಯ ಕರ್ನಾಟಕ ಕಂಡ ಬಹುದೊಡ್ಡ ಸಂಸ್ಕೃತ – ಕನ್ನಡ ವಿದ್ವಾಂಸರು. ಸಂಸ್ಕೃತದಲ್ಲಿ ೩೦, ಕನ್ನಡದಲ್ಲಿ ೧೩೦ ಕೃತಿಗಳನ್ನು ರಚಿಸಿದ್ದಾರೆ.

ವಿದ್ಯಾವಾಚಸ್ಪತಿ ಎಂಬುದು ಅವರ ಪಾಂಡಿತ್ಯಕ್ಕೆ ಸಂದ ಬಿರುದು. ಕರ್ನಾಟಕ ರಾಜ್ಯೋತ್ಸವ ಪ್ರಶಸ್ತಿ, ಕರ್ನಾಟಕ ಸಾಹಿತ್ಯ ಅಕಾಡೆಮಿ ಪ್ರಶಸ್ತಿ, ಮಂಗಳೂರು ವಿಶ್ವವಿದ್ಯಾಲಯದ ಗೌರವ ಡಾಕ್ಟರೇಟ್, ಕೇಂದ್ರ ಸಾಹಿತ್ಯ ಅಕಾಡೆಮಿ ಪ್ರಶಸ್ತಿ ಅವರಿಗೆ ಸಂದಿವೆ.

ಭಗವಂತನ ನಲ್ನುಡಿ, ಮುಗಿಲ ಮಾತು, ಹೇಳದೆ ಉಳಿದದ್ದು, ಮತ್ತೆ ರಾಮನ ಕತೆ, ಮಹಾಶ್ವೇತೆ, ನೆನಪಾದಳು ಶಕುಂತಲೆ, ಆವೆಯ ಮಣ್ಣಿನ ಆಟದ ಬಂಡಿ, ಸಮಾರಂಭಗಳ ಹಣಿಗೆ – ಇವು ಇವರ ಕೆಲವು ಸಾಹಿತ್ಯ ಕೃತಿಗಳು.

Downloaded from scoringtarget.com